# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 154, ಬಸವನಗುಡಿ ಬೆಂಗಳೂರು.

ಸಂಖ್ಯೆ: ಸ.ಅ/ವಾ-154/2022-23 ದಿನಾಂಕ: 03-10-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21. ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 01-10-2022 ಶನಿವಾರ ವಾರ್ಡ್ ಸಂಖ್ಯೆ: 154, ಬಸವನಗುಡಿ ವಾರ್ಡ್ ಕಛೇರಿಯಲ್ಲಿ ನಡೆದ ಅಕ್ಟೋಬರ್ ತಿಂಗಳ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ: ಬಿಬಿಎಂಪಿ ವಾರ್ಡ್ ಕಛೇರಿ, ಬಸವನಗುಡಿ, ಎನ್.ಆರ್. ಕಾಲೋನಿ ಹತ್ತಿರ
ಸಮಯ: ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಮಂಜುನಾಥ ರೆಡ್ಡಿ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-154, ಬಸವನಗುಡಿ |
| 3 | ಶ್ರೀಮತಿ. ಮಾಲಿನಿ. ಎಂ | ಬೀದಿ ದೀಪ ನಿರ್ವಹಣೆ |
| 4 | ಶ್ರೀ.ಎ.ಟಿ. ಕುಮಾರ್ ಎ.ಎಸ್.ಐ | ಬಸವನಗುಡಿ ಪೋಲೀಸ್ ಠಾಣೆ ಸಂಚಾರ |
| 5 | ಶ್ರೀ. ಸತೀಶ್ ಉರಾಳ್ | ಸಾರ್ವಜನಿಕರು |
| 6 | ಶ್ರೀ.ಬಿ. ರಾಜು ವಿಶ್ವಕರ್ಮ | ಸಾರ್ವಜನಿಕರು |
| 7 | ಶ್ರೀ.ಎನ್. ಮಂಜುನಾಥ್ | ಸಾರ್ವಜನಿಕರು |
| 8 | ಶ್ರೀ.ಬಿ.ಕೆ. ಶ್ರೀನಿವಾಸ್ | ಸಾರ್ವಜನಿಕರು |
| 9 | ಶ್ರೀ. ಗಿರಿವಾಸಲುನಾಯ್ಡು | ಸಾರ್ವಜನಿಕರು |
| 10 | ಶ್ರೀ.ಎಸ್. ಶ್ರೀಧರ್ | ಸಾರ್ವಜನಿಕರು |
| 11 | ಶ್ರೀ. ಗುರುಪ್ರಸಾದ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ಮಂಜುನಾಥ ರೆಡ್ಡಿ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ಗುರುಪ್ರಸಾದ್ ಸಾರ್ವಜನಿಕರು ಮಾತನಾಡುತ್ತಾ ಠಾಗೂರ್ ವೃತ್ತದಿಂದ ಗಾಂಧಿಬಜಾರ್ ರಸ್ತೆಯಲ್ಲಿ ರಸ್ತೆ ಕಾಮಗಾರಿ ನಡೆಯುತ್ತಿರುವುದರಿಂದ ವಾಹನಗಳ ದಟ್ಟಣೆ ಪಕ್ಕದಲ್ಲಿನ ಬ್ಯೂಗಲ್ ರಾಕ್ ರಸ್ತೆ, ಡಿ.ವಿ.ಜಿ ರಸ್ತೆ, ಮಲ್ಲಿಕಾರ್ಜುನ ರಸ್ತೆಗಳಲ್ಲಿ ಹೆಚ್ಚಾಗುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದ್ದು ಈ ಬಗ್ಗೆ ಕ್ರಮಕೈಗೊಳ್ಳಲು ಸಂಬಂಧಿಸಿದವರಿಗೆ ತಿಳಿಸಲು ಕೋರಿರುತ್ತಾರೆ ಮತ್ತು ಬಸವನಗುಡಿ ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಪ್ರಮುಖ ರಸ್ತೆಗಳಲ್ಲಿ ವಾಹನ ನಿಲುಗಡೆಯಿಂದ ಮತ್ತು ಪಾದಚಾರಿ ಮಾರ್ಗಗಳ ಅತಿಕ್ರಮಣದಿಂದ ಸಾರ್ವಜನಿಕರು ಪಾದಚಾರಿಗಳ ಓಡಾಟಕ್ಕೆ ತೊಂದರೆಯಾಗುತ್ತಿದ್ದು ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಸಭೆಯಲ್ಲಿ ಕೋರಿರುತ್ತಾರೆ.

ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಕ್ರಮವಹಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿರುತ್ತಾರೆ.



Scanned with CamScanner

ಎನ್.ಆರ್. ಕಾಲೋನಿ 5ನೇ ಅಡ್ಡರಸ್ತೆಯಲ್ಲಿ ಮರವನ್ನು ತೆರವುಗೊಳಿಸಿದ್ದು ಮರದ ಬುಡವು ಅಲ್ಲೇ ಇರುವುದರಿಂದ ಅದನ್ನು ತೆರವುಗೊಳಿಸಲು ಕ್ರಮಕೈಗೊಳ್ಳಬೇಕೆಂದು ಸಾರ್ವಜನಿಕರು ಕೋರಿರುತ್ತಾರೆ.

ಸಭೆಗೆ ಹಾಜರಾಗುವ ಸರ್ಕಾರಿ ಅಧಿಕಾರಿಗಳು ಸಭೆಯಲ್ಲಿ ಚರ್ಚೆಯಾಗುವ ವಿಷಯಗಳನ್ನು ದಾಖಲಿಸಲು ಮತ್ತು ಕ್ರಮವಹಿಸಲು ಪ್ರತ್ಯೇಕ ಪುಸ್ತಕವನ್ನು ತರುವುದು ಕಡ್ಡಾಯಗೊಳಿಸಲು ಸಭೆಯಲ್ಲಿ ಕೋರಿರುತ್ತಾರೆ.

ಈ ಬಗ್ಗೆ ಸಂಬಂಧಿಸಿದವರಿಗೆ ವಿಷಯ ತಿಳಿಸಲು ಹಾಗೂ ಪ್ರತಿ ಸಭೆಗೂ ತಪ್ಪದೇ ಹಾಜರಾಗಿ ಪ್ರತ್ಯೇಕ ಪುಸ್ತಕವನ್ನು ತರಲು ಸೂಚಿಸಿ ಪತ್ರ ಬರೆಯಲು ನೋಡಲ್ ಅಧಿಕಾರಿಗಳು ಸಹಾಯಕ ಅಭಿಯಂತರರಿಗೆ ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಶ್ರೀ. ಚಂದ್ರಶೇಖರ್ ರವರು ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಿರುವ ಸಿ.ಸಿ. ಕ್ಯಾಮರಾಗಳ ವಿವರಗಳನ್ನು ನೀಡಲು ಕೋರಿರುತ್ತಾರೆ.

ಸಭೆಯಲ್ಲಿ ಸಾರ್ವಜನಿಕರು ವಾರ್ಡ್ ವ್ಯಾಪ್ತಿಯಲ್ಲಿನ ಪಾದಚಾರಿ ರಸ್ತೆಗಳಲ್ಲಿನ ಅತಿಕ್ರಮಣವನ್ನು ತೆರವುಗೊಳಿಸುವ ಬಗ್ಗೆ, ಕಿರಿದಾದ ರಸ್ತೆಗಳಲ್ಲಿ ಗಿಡಗಳನ್ನು ನೆಡುವುದನ್ನು ತಡೆಯಲು ಕೋರಿರುತ್ತಾರೆ. ನೆಟ್ಕಲ್ಲಪ್ಪ ವೃತ್ತದಲ್ಲಿನ ಮೋರಿ ದುರಸ್ಥಿ, ಮನೋನಂದನ ಶಾಲೆ ಬಳಿ ಸಂಗ್ರಹವಾಗಿರುವ ತ್ಯಾಜ್ಯವನ್ನು ತೆರವುಗೊಳಿಸುವುದು ಹಾಗೂ ಪ್ರಮುಖ ರಸ್ತೆಗಳ ಕೂಡು ಜಾಗದಲ್ಲಿ ವಾಹನ ನಿಲುಗಡೆಯನ್ನು ತಡೆಗಟ್ಟಲು ಸಭೆಯಲ್ಲಿ ಕೋರಿರುತ್ತಾರೆ.

ಈ ಮೇಲಿನ ಅಂಶಗಳನ್ನು ಸ್ಥಳ ಪರಿಶೀಲಿಸಿ ಸೂಕ್ತ ಕ್ರಮಕೈಗೊಂಡು ವರದಿ ನೀಡಲು ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

ಪೂರ್ವ ಆಂಜನೇಯ ರಸ್ತೆ ಮತ್ತು ಪೋಲೀಸ್ ಠಾಣಾ ರಸ್ತೆಗಳಲ್ಲಿ ಅನಧಿಕೃತವಾಗಿ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿದ್ದು ಸದರಿ ರಸ್ತೆಯಲ್ಲಿನ ಅಂಗಡಿ ಮಳಿಗೆಗಳಿಗೆ ಪರವಾನಗಿ ನೀಡಿರುವ ಬಗ್ಗೆ ದಾಖಲಾತಿಗಳನ್ನು ನೀಡಲು ಸಭೆಯಲ್ಲಿ ಸಾರ್ವಜನಿಕರು ಕೇಳಿರುತ್ತಾರೆ.

ಈ ಬಗ್ಗೆ ಆರೋಗ್ಯಾಧಿಕಾರಿಗಳಿಗೆ ಪತ್ರ ಬರೆದು ಮಾಹಿತಿ ಪಡೆದು ಸಭೆಗೆ ಹಾಜರುಪಡಿಸಲು ನೋಡಲ್ ಅಧಿಕಾರಿಗಳು ಸಹಾಯಕ ಅಭಿಯಂತರರಿಗೆ ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ಅಧ್ಯಕ್ಷರು ರವರು ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 154, ಬಸವನಗುಡಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 154, ಬಸವನಗುಡಿ



Scanned with CamScanner